ಹಾಗೂ ಈ ರಸ್ತೆ ಡಾಂಬರೀಕರಣ ಕೆಲಸಕ್ಕೆ ತಗಲುವ ವೆಚ್ಚ ಸುಮಾರು 24 ಕೋಟಿ ರೂ.ಗಳು.

ಅ) ಗದಗ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 95-96ನೇ ಸಾಲಿನಲ್ಲಿ ಒಟ್ಟು 18 ಕಿ.ಮೀ. ಉದ್ಧದ ಕೆಳಕಂಡ ರಸ್ತೆಗಳ ಆಯ್ದ ಭಾಗಗಳಲ್ಲಿ ಡಾಂಬರೀಕರಣ ಕೆಲಸ ಮಾಡಲಾಗುವುದು.

1) ಹುಲಕೋಟಿ - ಕುರ್ತಕೋಟಿ - ಅಂತೂರ - ಭಂತೂರ - ಮುಳಗುಂದ ರಸ್ತೆ (8 ಕಿ.ಮೀ. ಉದ್ದಕ್ಕೆ)
2) ಹುಲಕೋಟಿ - ಮದಗಾನೂರ ರಸ್ತೆ. (2.50 ಕಿ.ಮೀ. ಉದ್ದಕ್ಕೆ)
3) ಬಾಳೇಗುಳಿ - ಜೋಳದರಾಶಿ ರಸ್ತೆ. (3.30 ಕಿ.ಮೀ. ಉದ್ದಕ್ಕೆ)
4) ಹುಲಕೋಟಿ ಮದಗಾನೂರ ರಸ್ತೆ. (1.20 ಕಿ.ಮೀ. ಉದ್ದಕ್ಕೆ)

ಗದಗ್‌ನಲ್ಲಿ ವಾರ್ತಾ ಇಲಾಖೆಯ ಕಛೇರಿ ಪ್ರಾರಂಭಿಸುವ ಬಗ್ಗೆ

368 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಗದಗ್ ಧಾರವಾಡ ಜಿಲ್ಲೆಯ ಉಪ ವಿಭಾಗೀಯ ಕೇಂದ್ರವಾಗಿದ್ದು ಇಲ್ಲಿ ವಾರ್ತಾ ಇಲಾಖೆಯ ಕಛೇರಿ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?*

ಆ) *ಹಾಗಿದ್ದಲ್ಲಿ ಗದಗ್‌ದಲ್ಲಿ ವಾರ್ತಾ ಇಲಾಖೆಯ ಕಛೇರಿಯನ್ನು ಎಂದು ಪ್ರಾರಂಭಿಸಲಾಗುವುದು?*

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) ಹೌದು

ಆ) ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಜಿಲ್ಲಾ ಪಂಚಾಯತ್ ತಾಲ್ಲೂಕ್ ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ಅಧ್ಯಕ್ಷರ ಹುದ್ದೆಗಳ ಮೀಸಲಾತಿ

371 - ಶ್ರೀ ಡಿ.ಆರ್. ಪಾಟೀಲ್ (ಗದಗ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಜಿಲ್ಲಾ ಪರಿಷತ್ ಮಂಡಲ ಪಂಚಾಯತ್ ಕಾಯ್ದೆಯಂತೆ 1987ರಲ್ಲಿ ಅಸ್ತಿತ್ವಕ್ಕೆ ಬಂದಿದ್ದ ಜಿಲ್ಲಾ ಪರಿಷತ್ ಹಾಗೂ ಮಂಡಲ ಪಂಚಾಯತ್‌ಗಳಲ್ಲಿ ಎಷ್ಟು ಜಿಲ್ಲಾ ಪರಿಷತ್‌ಗಳು ಹಾಗೂ ಮಂಡಲ ಪಂಚಾಯತ್‌ಗಳಲ್ಲಿ ಪರಿಶಿಷ್ಟ ಜಾತಿ : ಪರಿಶಿಷ್ಟ ಜನಾಂಗದವರು ಅಧ್ಯಕ್ಷರಾಗಿದ್ದರು ಎಷ್ಟು ಜನ ಹಿಂದುಳಿದ ವರ್ಗಕ್ಕೆ ಸೇರಿದವರು ಅಧ್ಯಕ್ಷರಾಗಿದ್ದರು ಎಷ್ಟು ಮಹಿಳೆಯರು ಅಧ್ಯಕ್ಷರಾಗಿದ್ದರು, (ಜಿಲ್ಲಾವಾರು ವಿವರ ನೀಡುವುದು)*

ಆ) *ಜಿಲ್ಲಾ ಪಂಚಾಯತ್ 1993ರ ಕಾಯ್ದೆಯನ್ವಯ ಅಸ್ತಿತ್ವಕ್ಕೆ ಬಂದಿರುವ ಗ್ರಾಮ ಪಂಚಾಯತ್ ತಾಲ್ಲೂಕುಗಳಲ್ಲಿ ಕ್ರಮವಾಗಿ ಎಷ್ಟು ಜನ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಮಹಿಳೆಯರು ಅಧ್ಯಕ್ಷರಾಗಿದ್ದಾರೆ (ಜಿಲ್ಲಾವಾರು ವಿವರ ನೀಡುವುದು)*

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು):